ಕರ್ನಾಟಕ ಸರ್ಕಾರ
(ಪಿ.ಆರ್.ಪಿ.67)

| ಹೇಳಿಕೆ ಹಾಳೆ<br>(ಆರ್.ಪಿ.ಸಂಖ್ಯೆ 57)<br>ನಮೂನೆ ಸಂಖ್ಯೆ 4 |
|---|

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ಹಾಗೂ ಸ್ಪೆಷಲ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**
**ಸ್ಪೆಷಲ್ ಕೇಸ್ ನಂಬರ್ : 92/2011**

**ಫ್ರಾಸಾ- 53 ಚಾಸಾ- 74**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ಸ್ವಾಮಿ |
| ತಂದೆಯ ಹೆಸರುಃ | : | ಮಲ್ಲಿಗೆಗೌಡ |
| ವಯಸ್ಸುಃ | : | 55 ವರ್ಷ |
| ಉದ್ಯೋಗಃ | : | ವ್ಯಾಪಾರ |
| ವಾಸ | : | ಚನ್ನರಾಯಪಟ್ಟಣ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ: 26-06-2025:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ವಿಶೇಷ ಅಭಿಯೋಜಕರಿಂದಃ**

ನಾನು 37 ವರ್ಷಗಳಿಂದ ಚನ್ನರಾಯಪಟ್ಟಣದದಲ್ಲಿ ಬಾಳೆಹಣ್ಣಿನ ವ್ಯಾಪಾರ ಮಾಡುತ್ತಿದ್ದೇನೆ. ನ್ಯಾಯಾಲಯದ ಮುಂದಿರುವ ಆರೋಪಿತರ ಪರಿಚಯವಿದೆ. ಆರೋಪಿತರು ಕೆ ಎಸ್ ಆರ್ ಟಿ ಸಿ ಬಸ್ ನಿರ್ವಾಹಕರಾಗಿದ್ದರು. ಅವರಿಗೂ ನನಗೂ ಚೀಟಿ ವ್ಯವಹಾರ ಇತ್ತು. ಅವರು ನನಗೆ 33ಸಾವಿರ ರೂ ಕೊಡಬೇಕಾಗಿತ್ತು, ಅದನ್ನು ಕೊಟ್ಟಿದ್ದರು. ಬೇರೆ ಯಾವುದೇ ಸಾಲವನ್ನು ನಾನು ಆರೋಪಿತರಿಂದ ಪಡೆದುಕೊಂಡಿಲ್ಲ.

(ಈ ಹಂತದಲ್ಲಿ ಮಾನ್ಯ ವಿಶೇಷ ಅಭಿಯೋಜಕರು ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ, ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ದಾಖಲೆಗೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿಯುವುದು ಕಂಡುಬರುತ್ತದೆ, ಆದ್ದರಿಂದ ಮಾನ್ಯ ವಿಶೇಷ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ ಸಾಕ್ಷಿಯನ್ನು **ಭಾಗಶಃ** ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ)

**ಪಾಟೀಸವಾಲುಃ ಸರ್ಕಾರದ ಪರ ಮಾನ್ಯ ವಿಶೇಷ ಅಭಿಯೋಜಕರಿಂದಃ**

ಆರೋಪಿತರಿಂದ ನಾನು ದಿಃ28-1-2008 ಮತ್ ದಿಃ26-7-2008ರಂದು 15 ಮತ್ತು 18ಸಾವಿರ ರೂಪಾಯಿ ಹಣವನ್ನು ಸಾಲ ಪಡೆದಿದ್ದೆನು, ಅದನ್ನು ಆರೋಪಿತರು ತಮ್ಮ ಬ್ಯಾಂಕ್ ಖಾತೆ ಚೆಕ್ ಮೂಲಕ ನನಗೆ ಕೊಟ್ಟಿದ್ದರು ಎಂದರೆ ಸರಿಯಲ್ಲ. ನಂತರ ಆ ಹಣವನ್ನು ನಾನು ನಗದಾಗಿ

ಕೊಟ್ಟು ತೀರಿಸಿರುತ್ತೇನೆ ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರವಾಗಿ ನಾನು ಈಗ ನನಗೆ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಓದಿ ಹೇಳಿದ ಸದರಿ ಹೇಳಿಕೆಯ ಭಾಗವನ್ನು ನಿಪಿ-93 ಎಂದು ಗುರುತಿಸಲಾಯಿತು. ಆರೋಪಿತರಿಂದ ಸಾಲ ಪಡೆದಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿದಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ಶ್ರೀ ಬಿ ಜೆ ಪಿ ಎಸ್ ವಕೀಲರಿಂದಃ**

ನಾನು ಹಣದ ವ್ಯವಹಾರವನ್ನು ಧನಲಕ್ಷ್ಮೀ ಫೈನಾನ್ಸ್ ನಲ್ಲಿ ಮಾಡಿದ್ದು ಎಂದರೆ ಸರಿ.ಸಾಲವನ್ನು ಪಡೆದದ್ದು ಅದೇ ಧನಲಕ್ಷ್ಮೀ ಫೈನಾನ್ಸ್ ನಲ್ಲಿ ಮತ್ತು ಅದನ್ನು ವಾಪಸ್ ಕೊಟ್ಟದ್ದೂ ಅಲ್ಲೇ ಎಂದರೆ ಸರಿ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ಹಾಗೂ ಸ್ಪೆಷಲ್**

**ನ್ಯಾಯಾಧೀಶರು, ಹಾಸನ.**